ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

ಚುಕ್ಕೆ ಗುರುತಿನ ಪ್ರಶ್ನೆ

ದಿನಾಂಕ : 17-03-2021 ಪ್ರಶ್ನೆ ಸಂಖ್ಯೆ : 197 (1435)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)

ಉತ್ತರ ನೀಡಬೇಕಾದ ದಿನಾಂಕ : 17-03-2021

ಉತ್ತರಿಸುವ ಸಚಿವರು : ಕಂದಾಯ ಸಚಿವರು

ವಿಷಯ : ನಮೂನೆ-57ರಲ್ಲಿ ಅರ್ಜಿಸಲ್ಲಿಕೆಗೆ ಅವಕಾಶ ಕಲ್ಪಿಸುವ ಕುರಿತು

(ಅ) ರಾಜ್ಯದಲ್ಲಿ ಶಾಸನಬದ್ಧವಾಗಿ ಅಕ್ರಮ ಸಕ್ರಮ ಯೋಜನೆಯ ನಮೂನೆ-57ರಲ್ಲಿ ಅರ್ಜಿಯನ್ನು ಸಲ್ಲಿಸಲು ಯಾವ ದಿನಾಂಕದಿಂದ ಯಾವ ದಿನಾಂಕವರೆಗೆ ಅವಕಾಶವನ್ನು ಕಲ್ಪಿಸಲಾಗಿರುತ್ತದೆ ; (ಪ್ರತಿಯನ್ನು ಒದಗಿಸುವುದು)

(ಆ) ರಾಜ್ಯದಲ್ಲಿ ಅಕ್ರಮ ಯೋಜನೆಯಡಿ ನಮೂನೆ-57ರಲ್ಲಿ ಸಲ್ಲಿಕೆಯಾದ ಅರ್ಜಿಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು, ತಾಲ್ಲೂಕುವಾರು, ಮಾಹಿತಿಯನ್ನು ಒದಗಿಸುವುದು)

(ಇ) ಉಡುಪಿ ಜಿಲ್ಲೆಯಲ್ಲಿ ರೈತರಿಗೆ ಶಾಸನಬದ್ಧವಾಗಿ ಅರ್ಜಿಯನ್ನು ಸಲ್ಲಿಸಲು ಸಮಯಾವಕಾಶವಿದ್ದರೂ ಸಹಾ ಲೋಕಸಭಾ ಚುನಾವಣೆಯ ನೆಪವೊಡ್ಡಿ 8 ದಿನಗಳು ಬಾಕಿಯಿರುವಾಗಲೇ ಅರ್ಜಿಯನ್ನು ಸ್ವೀಕರಿಸದಿರಲು ಕಾರಣವೇನು; ಇದರಿಂದ ಶಾಸನಬದ್ಧ ಹಕ್ಕಿನಿಂದ ರೈತರು ವಂಚಿತರಾದಂತಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ರೈತರಿಗೆ ನ್ಯಾಯ ಒದಗಿಸುವ ನಿಟ್ಟಿನಲ್ಲಿ ಅವಕಾಶ ಕಲ್ಪಿಸುವ ಬಗ್ಗೆ ಸರ್ಕಾರದ ಕ್ರಮವೇನು ?